ಇ) ಪ್ರಾಣ ಹಾನಿಗೆ ರೂ. 1.00 ಲಕ್ಷ ಪರಿಹಾರ ನೀಡಲಾಗುತ್ತಿದೆ. ಬೆಳೆನಷ್ಟಕ್ಕೆ ಸರ್ಕಾರದ ಆದೇಶ ಸಂಖ್ಯೆ: ಅಪಜೀ 52 ಎಫ್‌ಡಬ್ಲ್ಯೂಎಲ್ 96 ದಿನಾಂಕ: 12–02–2002 ಪ್ರಕಾರ ಪರಿಹಾರ ನೀಡಲಾಗುತ್ತಿದೆ.

ಈ) ವನ್ಯಪ್ರಾಣಿಗಳಿಂದ ಉಂಟಾಗುವ ಮಾನವ ಪ್ರಾಣಹಾನಿ, ಬೆಳೆನಷ್ಟ ಮುಂತಾದ ಪ್ರಕರಣಗಳಿಗೆ ಪರಿಹಾರ ಮೊತ್ತವನ್ನು ಪೆಚ್ಚಿಸುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

623 (1123) ಶ್ರೀ ಬೋಪಯ್ಯ. ಕೆ.ಜಿ. (ಮಡಿಕೇರಿ): ಮಾನ್ಯ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೊಡಗು ಜಿಲ್ಲೆಯಲ್ಲಿ ಕಾಡಾನೆಗಳ ಹಾವಳಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಕಾಡಾನೆಗಳ ಹಾವಳಿ ನಿಯಂತ್ರಿಸಲು ಸರ್ಕಾರ ಕೈಗೊಂಡ ಕ್ರಮವೇನು;

ಇ) ಜಿಲ್ಲೆಯಲ್ಲಿ 2003–04, 2004–05, 2005–06ನೇ ಸಾಲಿನಲ್ಲಿ ಕಾಡಾನೆ ಹಾವಳಿಯಿಂದ ರೈತರಿಗೆ ಆದ ನಷ್ಟವೆಷ್ಟು;

ಈ) ಇದಕ್ಕಾಗಿ ಎಷ್ಟು ಪರಿಹಾರ ಒದಗಿಸಲಾಗಿದೆ; (ಕ್ಷೇತ್ರವಾರು ಎಲ್ಲಾ ವಿವರಗಳನ್ನು ಒದಗಿಸುವುದು);

ಶ್ರೀ ಸಿ. ಚನ್ನಿಗಪ್ಪ (ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) :

ಅ) ಹೌದು ಬಂದಿದೆ.

ಆ) ಕೊಡಗು ಜಿಲ್ಲೆಯಲ್ಲಿ ಕಾಡಾನೆಗಳ ಹಾವಳಿ ತಡೆಗಟ್ಟಲು ಅರಣ್ಯ ಇಲಾಖೆಯು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ.

1. ಸ್ಥಳೀಯ ಆನೆ ಓಡಿಸುವ ವಾಚರುಗಳು / ಪಟಾಕಿಗಳ ಸಹಾಯದಿಂದ ಕಾಡಿನಿಂದ ಹೊರಬಂದ ಆನೆಗಳನ್ನು ಕಾಡಿನೊಳಗೆ ಓಡಿಸಲು ಕ್ರಮ ತೆಗೆದುಕೊಳ್ಳುವುದು.
2. ಕಾಡಾನೆಗಳ ಹಾವಳಿ ಅಧಿಕವಾಗಿರುವ ಸೂಕ್ಷ್ಮ ಸ್ಥಳಗಳಲ್ಲಿ ಅರಣ್ಯ ಪ್ರದೇಶದ ಅಂಚಿನಲ್ಲಿ ಆನೆ ನಿರೋಧಕ ಕಂದಕಗಳ ನಿರ್ಮಾಣ ಮಾಡುವುದು.
3. ಕಾಡಾನೆಗಳ ಹಾವಳಿ ಇರುವ ಸ್ಥಳಗಳಲ್ಲಿ ಅರಣ್ಯ ಪ್ರದೇಶಗಳ ಅಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ ಮಾಡುವುದು.
4. ಕುಂಕಿ ಶಿಬಿರದ ಸಾಕಾನೆಗಳ ಸಹಾಯದಿಂದ ಕಾಡಾನೆಗಳನ್ನು ಕಾಡಿನೊಳಗೆ ಓಡಿಸುವ ಕಾರ್ಯಾಚರಣೆ ಮಾಡಲಾಗುವುದು.
5. ಅರಣ್ಯ ಪ್ರದೇಶಗಳಲ್ಲಿ ಕಾಡಾನೆಗಳಿಗೆ ವರ್ಷವಿಡೀ ಕುಡಿಯುವ ನೀರು ದೊರಕುವಂತೆ ಅರಣ್ಯದಲ್ಲಿರುವ ಕೆರೆಗಳ ಹೂಳು ತೆಗೆಯುವುದು. ಇದರಿಂದಾಗಿ ಖಾಸಗಿ ಪ್ರದೇಶಕ್ಕೆ ಆನೆಗಳು ನುಗ್ಗುವುದನ್ನು ತಪ್ಪಿಸಬಹುದು.
6. ಸಾರ್ವಜನಿಕರ ಆಸ್ತಿ ಪಾಸ್ತಿಗಳಿಗೆ ಹಾಗೂ ಮಾನವ ಸಾವಿಗೆ ಕಾರಣವಾಗಿರುವ ಪುಂಡ ಕಾಡಾನೆಗಳನ್ನು ಗುರುತಿಸಿ ಅವುಗಳನ್ನು ಹಿಡಿಯುವುದು.

ವರ್ಷ	ಪ್ರಕರಣಗಳ ಸಂಖ್ಯೆ	ಮೊತ್ತ (ರೂ.)
2003–04	524	10,31,514/–
2004–05	480	7,90,949/–
2005–06	740	11,86,845/–

ಈ) ವಿವರ ಈ ಕೆಳಗಿನಂತಿರುತ್ತದೆ.

	ಮಡಿಕೇರಿ ತಾಲ್ಲೂಕು		ವಿರಾಜಪೇಟೆ ತಾಲ್ಲೂಕು		ಸೋಮವಾರಪೇಟೆ ತಾಲ್ಲೂಕು	
	ಪ್ರಕರಣ ಸಂಖ್ಯೆ	ಮೊತ್ತ	ಪ್ರಕರಣ ಸಂಖ್ಯೆ	ಮೊತ್ತ	ಪ್ರಕರಣ ಸಂಖ್ಯೆ	ಮೊತ್ತ
2003–04	48	77,908/–	189	4,11,057/–	287	5,48,459/–
2004–05	71	77,198/–	169	3,13,865/–	240	3,99,886/–
2005–06	122	1,48,558/–	156	3,30,798/–	462	7,07,489/–

624 (1062) ಶ್ರೀ ಧ್ರುವನಾರಾಯಣ ಆರ್. (ಸಂತೇಮಾರಳ್ಳಿ): ಮಾನ್ಯ ಯೋಜನೆ, ಅಂಕಿ–ಅಂಶ, ಸಣ್ಣ ಉಳಿತಾಯ, ಲಾಟರಿ, ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ರೇಷ್ಮೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು, ಹೋಬಳಿ ಕೇಂದ್ರ ಸ್ಥಳಗಳಲ್ಲಿ ರೇಷ್ಮೆ ಇಲಾಖೆಯು ವಿಶ್ವಬ್ಯಾಂಕ್ ಯೋಜನೆಯಲ್ಲಿ ನಿರ್ಮಿಸಿರುವ ಕಟ್ಟಡಗಳು ಈವರೆಗೂ ಖಾಲಿ ಇರುವುದು ನಿಜವೇ;

ಆ) ಈ ಕಟ್ಟಡಗಳ ವಾರ್ಷಿಕ ನಿರ್ವಹಣೆಗೆ ಹಣ ನೀಡದೆ ಕಟ್ಟಡಗಳು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮವೇನು;

ಈ) ಈ ಕಟ್ಟಡಗಳನ್ನು ಶಿಕ್ಷಣ ಇಲಾಖೆಗೆ ನೀಡಿದರೆ ಈಗಿರುವ ಶಾಲಾ–ಕಾಲೇಜು ವಿದ್ಯಾರ್ಥಿ / ವಿದ್ಯಾರ್ಥಿನಿಯರಿಗೆ ಬೋಧನಾ ಕೊಠಡಿಗಳ ಅನುಕೂಲವನ್ನು ಕಲ್ಪಿಸಿ ಕೊಟ್ಟಂತಾಗುವುದಿಲ್ಲವೇ;

ಉ) ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ರಾಮಚಂದ್ರಗೌಡ (ಯೋಜನೆ, ಅಂಕಿ–ಅಂಶ, ಸಣ್ಣ ಉಳಿತಾಯ, ಲಾಟರಿ, ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ರೇಷ್ಮೆ ಸಚಿವರು) :

ಅ) ರೇಷ್ಮೆ ಕೃಷಿ ಅಭಿವೃದ್ಧಿಗಾಗಿ ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ರೇಷ್ಮೆ ಯೋಜನೆಯಡಿ 781 ಕಟ್ಟಡಗಳನ್ನು ನಿರ್ಮಿಸಲಾಗಿದೆ. ಇಲಾಖೆಯ ಚಟುವಟಿಕೆಗಳಿಲ್ಲದ 5 ಕಟ್ಟಡಗಳನ್ನು ಇತರ ಇಲಾಖೆಗಳಿಗೆ ಬಳಕೆಗೆ ನೀಡಲಾಗಿದೆ. ಉಳಿದ ಎಲ್ಲಾ ಕಟ್ಟಡಗಳನ್ನು ಬಳಸಲಾಗುತ್ತಿದೆ.

ಆ) ಬಂದಿದೆ.

ಇ) ಈ ಕಟ್ಟಡಗಳಿಗೆ ವಾರ್ಷಿಕ ನಿರ್ವಹಣೆ ಹಾಗೂ ದುರಸ್ತಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ ಮತ್ತು ಹೆಚ್ಚುವರಿ ವಂಟನೆಗೆ ಕ್ರಮ ಕೈಗೊಳ್ಳಲಾಗುತ್ತಿದೆ.